**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ, ಜೇವರಗಿ**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆಃ 179/2023**

**ಚಾ.ಸಾ-2**

**ಪ್ರಾ.ಸಾ-1**

**ಸಾಕ್ಷಿಗೆ ದಿನಾಂಕ 27-11-2023 ರಂದು ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು | ಃ | ಹರಿಚಂದ್ರ ಬೂಟ್ನಾಳ |
| ತಂದೆಯ ಹೆಸರು | ಃ | ವುರೇಪ್ಪ ಬೂಟ್ನಾಳ |
| ವಯಸ್ಸು | ಃ | 56-ವರ್ಷ |
| ಉದ್ಯೋಗ | ಃ | ಕೂಲಿ |
| ವಾಸಸ್ಥಳ | ಃ | ಜೇವರಗಿ |

**ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ**

ಆರೋಪಿ ಗೊತ್ತಿಲ್ಲ. ಚಾಸಾ-1 ಗೊತ್ತು. ಚಾಸಾ-3 ಗೊತ್ತಿಲ್ಲ.

ಸಾಕ್ಷಿಗೆ ಒಂದು ದಾಖಲಾತಿ ಸಾಕ್ಷಿಗೆ ತೋರಿಸಲಾಗಿ ಅದು ಜಪ್ತಿ ಪಂಚನಾಮೆಯಾಗಿದ್ದು ಅದರ ಮೇಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ಪಂಚನಾಮೆಯನ್ನು ನಿಪಿ-1 ಎಂದು ಗುರುತಿಸಲಾಯಿತು. ಸಾಕ್ಷಿ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ನಿಪಿ-1 ರ ದಾಖಲೆಗೆ 2-ವರ್ಷಗಳ ಹಿಂದೆ ಸಹಿ ಮಾಡಿರುತ್ತೇನೆ. ಪೋಲಿಸರು ನಿಪಿ-1 ಸಹಿ ಮಾಡು ಅಂತಾ ಹೇಳಿದ ಕಾರಣ ಸಹಿ ಮಾಡಿರುತ್ತೇನೆ. ನಿಪಿ-1 ರಲ್ಲಿ ಬರೆದಂತಹ ವಿಚಾರಗಳು ನನಗೆ ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ ಪಂಚನಾಮೆ ಮಾಡಿಲ್ಲ. ನನ್ನ ಸಮಕ್ಷಮ ಮದ್ಯದ ಪೌಚ ಹಾಗೂ ಹಣವನ್ನು ವಶಪಡಿಸಿಕೊಂಡಿಲ್ಲ. ಪೋಲಿಸರು ನಿಪಿ-1 ದಾಖಲೆಯಲ್ಲಿ ಬರೆದಂತಹ ವಿಚಾರಗಳನ್ನು ನನಗೆ ಓದಿ ಹೇಳಿಲ್ಲ.

(ಮಾನ್ಯ ಸ.ಸ.ಅ ರವರು ಸಾಕ್ಷಿ ಪ್ರತಿಕೂಲವಾಗಿ ಸಾಕ್ಷಿ ನುಡಿದಿದ್ದಾರೆ ಹಾಗಾಗಿ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಘೋಷಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಕೋರಿದ್ದು, ಮುಖ್ಯ ವಿಚಾರಣೆಯಲ್ಲಿ ಸಾಕ್ಷಿ ಅಭಿಯೋಜನೆಯ ಪ್ರಕರಣಕ್ಕೆ ವ್ಯತಿರೀಕ್ತವಾಗಿ ಸಾಕ್ಷ್ಯ ನುಡಿದಿರುವುದು ಮೇಲ್ನೋಟಕ್ಕೆ ಕಂಡುಬಂದಿರುವ ಕಾರಣ ಮಾನ್ಯ ಅಭಿಯೋಜನೆಯವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲು ಮಾನ್ಯ ಸ.ಸ.ಅ.ರವರಿಂದ**

ದಿನಾಂಕ 10-05-2023 ರಂದು ಮಧ್ಯಾಹ್ನ 2.35 ರಿಂದ 3.35 ಗಂಟೆವರೆಗೆ ಜೇವರ್ಗಿ ತಾಲ್ಲೂಕಿನ ಕುಡಿ ದುರ್ಗಾದ ಬಳಿ ಇರುವ ಕೊಬಾಳ್ಳ ಕ್ರಾಸ್ ಹತ್ತಿರವಿರುವ ಸಾರ್ವಜನಿಕ ಸ್ಥಳದಲ್ಲಿ ಪೋಲಿಸರು ನನ್ನ ಮತ್ತು ಚಾಸಾ-3 ರವರ ಸಮಕ್ಷಮ ನಿಪಿ-1 ರಂತೆ ಜಪ್ತಿ ಪಂಚನಾಮೆ ಜರುಗಿಸಿರುತ್ತಾರೆಂದರೆ ಸರಿಯಲ್ಲ. ಪಂಚನಾಮೆ ಸಮಯದಲ್ಲಿ ಪೋಲಿಸರು ಮದ್ಯದ ಪೌಚಗಳು ಹಾಗೂ ಹಣವನ್ನು ಆರೋಪಿತರು ಅಕ್ರಮವಾಗಿ ಮಾರಾಟ ಮಾಡುತ್ತಿದ್ದ ವಿಚಾರವಾಗಿ ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಪ್ರಕರಣದ ಎಲ್ಲಾ ವಿಚಾರಗಳು ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ

ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ  ಆರೋಪಿ ಪರ ವಕೀಲರಿಂದಃ ಇಲ್ಲ</u>**

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ.ಸರಿ ಅದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾ.ದಂಡಾಧಿಕಾರಿಗಳು
ಜೇವರಗಿ